ಉ) ಆಯವ್ಯಯದ ಲಭ್ಯತೆ ಹಾಗೂ ನಿವೇಶನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಬಾಡಿಗೆ ಕಟ್ಟಡಗಳಲ್ಲಿರುವ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.

ಮೆಟ್ರಿಕ್ ನಂತರದ ಮಹಿಳೆಯರ ವಿದ್ಯಾರ್ಥಿ ನಿಲಯ, ಬಂಗಾರಪೇಟೆ ಈ ನಿಲಯದ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದೆ.

ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಡಮಾಕನಹಳ್ಳಿ ಈ ನಿಲಯಕ್ಕೆ ಬಡಮಾಕನಹಳ್ಳಿ ಗ್ರಾಮದ ಸರ್ವೆ ನಂ: 245ರಲ್ಲಿ 11 ಗುಂಟೆ ಜಮೀನು ಮಂಜೂರಾಗಿರುತ್ತದೆ.

ಮೆಟ್ರಿಕ್ ನಂತರದ ಪುರುಷ ವಿದ್ಯಾರ್ಥಿ ನಿಲಯ, ಬಂಗಾರಪೇಟೆ ಟೌನ್ ಈ ನಿಲಯಕ್ಕೆ ಐನ್ನೋರಹೊಸಹಳ್ಳಿ ಗ್ರಾಮದ ಸರ್ವೆ ನಂ:128ರಲ್ಲಿ 4 ಎಕರೆ ಜಮೀನನ್ನು ಜಿಲ್ಲಾಧಿಕಾರಿಗಳು, ಕೋಲಾರ ಇವರು ಮಂಜೂರು ಮಾಡಿರುತ್ತಾರೆ. ಈ ನಿವೇಶನಗಳು ಸೂಕ್ತವಿರುವ ಬಗ್ಗೆ ಪರಿಶೀಲಿಸಿ ಸ್ವಂತ ಕಟ್ಟಡ ನಿರ್ಮಿಸಲು ಕ್ರಮವಹಿಸಲಾಗುವುದು.

ನ್ಯಾಯ ಬೆಲೆ ಅಂಗಡಿಗಳು

208(294); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರ ಪೇಟೆ)

ಅ) ಬಂಗಾರಪೇಟೆ ಕ್ಷೇತ್ರದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳೆಷ್ಟು;

ಆ) ಈ ಪೈಕಿ ಪರಿಶಿಷ್ಟ ಜಾತಿ/ಪಂಗಡ/ಅಂಗವಿಕಲರಿಗೆ ಮಂಜೂರಾದ ಅಂಗಡಿಗಳೆಷ್ಟು;

ಇ) 2014–15ನೇ ಸಾಲಿಗೆ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

ಈ) ಇದ್ದಲ್ಲಿ ಬಂಗಾರಪೇಟೆ ಕ್ಷೇತ್ರದಲ್ಲಿ ಎಷ್ಟು ಹೊಸ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಉದ್ದೇಶಿಸಿದೆ;

ಉ) ಪಡಿತರ ವಿತರಣೆ ವ್ಯವಸ್ಥೆಯನ್ನು ಬಲಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ದಿನೇಶ್ ಗುಂಡೂರಾವ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರು)

ಅ) ಬಂಗಾರಪೇಟೆ ಕ್ಷೇತ್ರದಲ್ಲಿ 94 ನ್ಯಾಯಬೆಲೆ ಅಂಗಡಿಗಳು ಇರುತ್ತವೆ.

ಆ) ಪರಿಶಿಷ್ಟ ಜಾತಿ – 8

ಪರಿಶಿಷ್ಟ ಪಂಗಡ – 1

ಅಂಗವಿಕಲರು – 0

ಇ) ಹೌದು, 2014–15ನೇ ಸಾಲಿಗೆ ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆ.

ಈ) 9 ಹೊಸ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಪ್ರಸ್ತಾವನೆ ಬಂದಿರುತ್ತವೆ.

ಉ) ಪಡಿತರ ವಿತರಣೆ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಹಾಗೂ ವ್ಯವಸ್ಥಿತವಾಗಿ ಬಲಪಡಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗಿದೆ.

1. ಯೋಜನೆಯ ಅರ್ಹ ಫಲಾನುಭವಿಗಳಿಗೆ ನ್ಯಾಯಬೆಲೆ ಅಂಗಡಿಗಳಿಂದ ನಿಗಧಿತ ವೇಳೆ ಹಾಗೂ ಸಮಯದಲ್ಲಿ ಪಡಿತರ ಪದಾರ್ಥಗಳು ದೊರೆಯುತ್ತಿರುವ ಬಗ್ಗೆ ಖಾತರಿ ಪಡಿಸಿಕೊಳ್ಳಲು **ಫೆಬ್ರವರಿ–2014** ರಿಂದ **ಪಡಿತರ ಖಾತರಿ** ಯೋಜನೆಯನ್ನು ಜಾರಿಗೆತರಲಾಗಿದೆ ಹಾಗೂ ಈ **ಯೋಜನೆಯ ಮೇಲುಸ್ತುವಾರಿಗಾಗಿ** ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ.

2. ಪಡಿತರ ಚೀಟಿದಾರರ ದೂರು/ಅಹವಾಲುಗಳನ್ನು ಪರಿಶೀಲಿಸಲು ದಿನಾಂಕ: 01.06.2014 ರಿಂದ ಜಾರಿಗೆ ಬರುವಂತೆ ಪ್ರತಿ ತಿಂಗಳು 7ನೇ ತಾರೀಖಿನಂದು **ಅನ್ನಭಾಗ್ಯ ಅದಾಲತ್** ನಡೆಸಲು ಯೋಜನೆಯನ್ನು ಜಾರಿಗೆ ತರಲಾಗಿದೆ.

3. ಅನ್ನಭಾಗ್ಯ ಯೋಜನೆಯನ್ನ ಸಮರ್ಪಕವಾಗಿ ಅನುಷ್ಠಾನಗೊಳಿಸಲು ನ್ಯಾಯಬೆಲೆ ಅಂಗಡಿ, ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಲಾಗಿದೆ.

4. ಪಡಿತರ ಚೀಟಿದಾರರಿಗೆ ಸರಿಯಾದ ಪ್ರಮಾಣ ಮತ್ತು ದರದಲ್ಲಿ ಆಹಾರಧಾನ್ಯ ವಿತರಿಸುವುದನ್ನು ಖಚಿತಪಡಿಸಿಕೊಳ್ಳಲು ನ್ಯಾಯಬೆಲೆ ಅಂಗಡಿಗಳಲ್ಲಿ ಇ–ಪಡಿತರ ಯಂತ್ರಗಳನ್ನು ಸ್ಥಾಪಿಸಲಾಗುತ್ತಿದೆ.

5. ಅನಧಿಕೃತ ದಾಸ್ತಾನು ಹಾಗೂ ದುರುಪಯೋಗವನ್ನು ತಡೆಗಟ್ಟಲು ರಾಜ್ಯದ ಎಲ್ಲಾ ಗೋದಾಮುಗಳನ್ನು ಕಂಪ್ಯೂಟರೀಕರಣ ಗೊಳಿಸಲಾಗುತ್ತಿದೆ.

6. ಅಧಿಕೃತ ವ್ಯಕ್ತಿ ಎತ್ತುವಳಿ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಸಗಟು ಮಳಿಗೆಗಳಲ್ಲಿ ನ್ಯಾಯಬೆಲೆ ಅಂಗಡಿ ನಡೆಸುವವರು ಬಯೋಮೆಟ್ರಿಕ್ ವ್ಯವಸ್ಥೆಯನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.

7. "ಅನ್ನಭಾಗ್ಯ" ಜಾರಿಗೊಳಿಸುವಲ್ಲಿ ಲೋಪದೋಷಗಳಿರುವ ಬಗ್ಗೆ ಸಾರ್ವಜನಿಕರಿಂದ ಬರುವ ದೂರುಗಳನ್ನು ಸಕಾಲದಲ್ಲಿ ಇತ್ಯರ್ಥಪಡಿಸುವ ಸಲುವಾಗಿ ಗ್ರಾಹಕರ ಸಹಾಯವಾಣಿ (1967 ಉಚಿತ ಕರೆ ಕೇಂದ್ರ) ಸ್ಥಾಪಿಸಲಾಗಿದೆ. ಆನ್‌ಲೈನ್ ಮೂಲಕವು ಸಹ ದೂರು ಸಲ್ಲಿಸಬಹುದು.

8. ಇಲಾಖೆಯ ವೆಬ್‌ಸೈಟ್‌ನಲ್ಲಿ ಎಲ್ಲ ಪಡಿತರ ಚೀಟಿಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಗಿದೆ. ಈ ಮಾಹಿತಿಯನ್ನು ಆಧರಿಸಿ ಸಾರ್ವಜನಿಕರು ಯಾವುದೇ ಪಡಿತರ ಚೀಟಿ ಬಗ್ಗೆ ತಮ್ಮ ಅಭಿಪ್ರಾಯವನ್ನು ದಾಖಲಿಸಬಹುದು. ಇದರ ಆಧಾರದ ಮೇರೆಗೆ ಅನರ್ಹ ಪಡಿತರ ಚೀಟಿ ಹೊಂದಿರುವ ಮಾಹಿತಿ ಸಂಗ್ರಹಿಸಿ ಕ್ರಮ ಕೈಗೊಳ್ಳಲಾಗುವುದು.

9. ಇದರ ಜೊತೆಗೆ ಪ್ರತಿ ನ್ಯಾಯಬೆಲೆ ಅಂಗಡಿಯಲ್ಲಿರುವ ಸಂಪೂರ್ಣ ಪಡಿತರ ಚೀಟಗಳ ಸಮಗ್ರ ತನಿಖೆ ನಡೆಸಿ ಅನರ್ಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುತ್ತಿದೆ.

10. ಪ್ರತಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯ್ತಿ ಮಟ್ಟದ ನೋಡಲ್ ಅಧಿಕಾರಿಯು ತಿಂಗಳಿಗೊಮ್ಮೆ ಆ ವ್ಯಾಪ್ತಿಯ ಕನಿಷ್ಠ 1 ನ್ಯಾಯಬೆಲೆ ಅಂಗಡಿಯನ್ನು ರ‍್ಯಾಂಡಮ್ ಆಗಿ ಪರಿಶೀಲಿಸಲು ನಿರ್ದೇಶಿಸಲಾಗಿದೆ.

11. ಪ್ರತಿ ನ್ಯಾಯಬೆಲೆ ಅಂಗಡಿಯಲ್ಲಿರುವ ಸಂಪೂರ್ಣ ಪಡಿತರ ಚೀಟಿಗಳ ಸಮಗ್ರ ತನಿಖೆ ನಡೆಸುವ ಮೂಲಕ ಹಾಗೂ ಪಡಿತರ ಚೀಟಿಗಳೊಂದಿಗೆ ಎಪಿಕ್ ನಂಬರ್‌ಗಳನ್ನು ಹೊಂದಾಣಿಕೆ ಮಾಡುವ ಮೂಲಕ ಅನರ್ಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುತ್ತಿದೆ.

12. 2014–15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ ಕಾಗದ ಪಡಿತರ ಚೀಟಿಯ ಬದಲು ಸ್ಮಾರ್ಟ್ ಕಾರ್ಡ್‌ಅನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

    ಎ) ಪ್ರತಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯ್ತಿ ಮಟ್ಟದ ನೋಡಲ್ ಅಧಿಕಾರಿಯು ತಿಂಗಳಿಗೊಮ್ಮೆ ಆ ವ್ಯಾಪ್ತಿಯ ಕನಿಷ್ಠ 1 ನ್ಯಾಯಬೆಲೆ

ಅಂಗಡಿಯನ್ನು ರ್‍ಯಾಂಡಮ್ ಆಗಿ ಪರಿಶೀಲಿಸಲು ನಿರ್ದೇಶಿಸಲಾಗಿದೆ.

ಬಿ) ನಗರ/ಪಟ್ಟಣ/ಪುರಸಭೆಗಳ ಸ್ಥಳೀಯ ಪ್ರಾಧಿಕಾರ ಅಧಿಕಾರಿಗಳು ತಿಂಗಳಿಗೊಮ್ಮೆ ತಮ್ಮ ವ್ಯಾಪ್ತಿಯಲ್ಲಿ ಕನಿಷ್ಠ 1 ನ್ಯಾಯಬೆಲೆ ಅಂಗಡಿಯನ್ನು ರ್‍ಯಾಂಡಮ್ ಆಗಿ ಪರಿಶೀಲಿಸಲು ನಿರ್ದೇಶಿಸಲಾಗಿದೆ.

ಸಿ) ಆಹಾರ ಅದಾಲತ್ ನಡೆಸಲು ಜಿಲ್ಲಾಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಉಪ ಕಾರ್ಯದರ್ಶಿಗಳು/ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳನ್ನು ಬಳಸಿಕೊಳ್ಳಲು ಸೂಚಿಸಲಾಗಿದೆ.

ಡಿ) ಪ್ರತಿ ಮಾಹೆ 7ನೇ ತಾರೀಕಿನಂದು ಸದರಿ ಅಧಿಕಾರಿಗಳು ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಯಾವುದೇ ಅರ್ಹ ಪಡಿತರ ಚೀಟಿದಾರರು ತಮ್ಮ ಪಾಲಿನ ಹಂಚಿಕೆಯಿಂದ ವಂಚಿತರಾಗಿರುವರೇ ಎಂಬ ಬಗ್ಗೆ ಪರಿಶೀಲಿಸಲು ಕ್ರಮ ಕೈಗೊಳ್ಳಲಾಗಿದ್ದು ಸದರಿ ದಿವಸವನ್ನು **"ಪಡಿತರ ಖಾತರಿ ದೃಢೀಕರಣ ದಿವಸ"** ಎಂದು ಪರಿಗಣಿಸಲು ನಿರ್ದೇಶಿಸಲಾಗಿದೆ.

13. ಪಡಿತರ ಚೀಟಿದಾರರು ತಮ್ಮ ಹಕ್ಕಿನ ಆಹಾರಧಾನ್ಯ ಹಂಚಿಕೆ ತಿಳಿಯಲು ಎಸ್.ಎಂ.ಎಸ್. ವ್ಯವಸ್ಥೆ ಜಾರಿಗೊಳಿಸಲಾಗಿದೆ. ಎಸ್.ಎಂ.ಎಸ್. ಮೂಲಕ ಅವರ ಹಕ್ಕಿನ ಆಹಾರಧಾನ್ಯ ಮಾಹಿತಿ ಪಡೆಯಬಹುದು.